## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಸಮೀಪದ ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರಿಂದ ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣವನ್ನು ಪ್ರೋತ್ಸಾಹಿಸಲು ಬಡ್ಡಿ ಸಹಾಯಧನ ನೀಡುವ ಬಗ್ಗೆ.

* * * * *

**ಸರ್ಕಾರದ ಆದೇಶ ಸಂಖ್ಯೆ: ಕೃಇ/49/ಕೃಇಕ/2013, ಬೆಂಗಳೂರು, ದಿನಾಂಕ: 01.10.2013.**

ಓದಲಾಗಿದೆ:

1. 2013–14ನೇ ಸಾಲಿನ ಪರಿಷ್ಕೃತ ಆಯವ್ಯಯ ಭಾಷಣ ಕಂಡಿಕೆ–57.
2. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್‌ಎನ್/ತಾಂ–1/ಆಯವ್ಯಯ ಕಂಡಿಕೆ/2013–14, ದಿನಾಂಕ:06.08.2013 ಮತ್ತು 07.08.2013.

ಮೇಲೆ ಓದಲಾದ (1)ರಲ್ಲಿ ದಿನಾಂಕ: 12.07.2013 ರಂದು ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿರುವ 2013–14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 57 ರಲ್ಲಿ ಕೃಷಿ ಸಮೀಪದ ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರಿಂದ ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣವನ್ನು ಪ್ರೋತ್ಸಾಹಿಸಲು ಬಡ್ಡಿ ಸಹಾಯಧನ ಯೋಜನೆಯನ್ನು ಪ್ರಸ್ತಾಪಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಕೃಷಿ ಆಯುಕ್ತರು 2013–14ನೇ ಸಾಲಿನಿಂದ ಕೃಷಿ ಸಮೀಪದ ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರಿಂದ ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣವನ್ನು ಪ್ರೋತ್ಸಾಹಿಸಲು ಬಡ್ಡಿ ಸಹಾಯಧನ ಯೋಜನೆಯ ಪ್ರಸ್ತಾವನೆಗೆ ಮಂಜೂರಾತಿ ಆದೇಶವನ್ನು ಹೊರಡಿಸುವಂತೆ ಕೋರಿ ಕೆಳಕಂಡಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ:

ಕಟಾವಿನ ನಂತರ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವ ಮೊದಲು ಮಳೆ, ಗಾಳಿ ಹಾಗೂ ಇತರೆ ವೈಪರೀತ್ಯದಿಂದ ಸಂರಕ್ಷಿಸಿ ವೈಜ್ಞಾನಿಕವಾಗಿ ಸಂಗ್ರಹಣೆ ಮಾಡಿ ರೈತರಿಗೆ ಹಾಗೂ ಬಳಕೆದಾರರಿಗೆ ಕೃಷಿ ಉತ್ಪನ್ನಗಳ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳಲು ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರಿಂದ ಉಗ್ರಾಣ ನಿರ್ಮಾಣ ಹಾಗೂ ಕೃಷಿ ಅದರಲ್ಲೂ ತೋಟಗಾರಿಕೆ ಉತ್ಪನ್ನಗಳು ಬೇಗನೆ ಹಾಳಾಗುವ ಕಾರಣ ನಷ್ಟದ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇದ್ದು, ರೈತರಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗದ ಕಾರಣ ಶೀತಲೀಕರಣ ಘಟಕಗಳ ನಿರ್ಮಾಣವನ್ನು ಸರ್ಕಾರದ ಸಹಾಯಧನ ಹಾಗೂ ವಾಣಿಜ್ಯ ಬ್ಯಾಂಕುಗಳು/ಪ್ರಾದೇಶಿಕ ಗ್ರಾಮೀಣ ಬ್ಯಾಂಕ್/ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳಿಂದ ಗೋದಾಮು ಹಾಗೂ ಶೀತಲೀಕರಣ ಘಟಕದ ಸ್ಥಾಪನೆಗೆ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸುವುದು.

ಕರ್ನಾಟಕ ರಾಜ್ಯದಲ್ಲಿ ಮುಖ್ಯವಾಗಿ ಭತ್ತ, ಜೋಳ, ರಾಗಿ, ಮುಸುಕಿನ ಜೋಳ, ಹತ್ತಿ, ಕಬ್ಬು, ತೊಗರಿ, ನೆಲಗಡಲೆ, ಸೂರ್ಯಕಾಂತಿ ಮತ್ತು ಎಳ್ಳು ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ವಾರ್ಷಿಕ ಸರಾಸರಿ 123 ಲಕ್ಷ ಮೆಟ್ರಿಕ್ ಟನ್‌ನಷ್ಟು ಆಹಾರ ಧಾನ್ಯವನ್ನು ಉತ್ಪಾದಿಸಲಾಗುತ್ತಿದೆ. ರಾಜ್ಯದಲ್ಲಿ ಅಂದಾಜು 41 ಲಕ್ಷ ಮೆಟ್ರಿಕ್ ಟನ್‌ನಷ್ಟು ಆಹಾರ ಧಾನ್ಯಗಳ ಸಂಗ್ರಹಣೆಗೆ ಗೋದಾಮುಗಳ ಅವಶ್ಯವಿದ್ದು, ಇದರಲ್ಲಿ ಸುಮಾರು 26.50 ಲಕ್ಷ ಮೆಟ್ರಿಕ್ ಟನ್‌ನಷ್ಟು ಆಹಾರ ಧಾನ್ಯಗಳ ಸಂಗ್ರಹಣಾ ಸಾಮರ್ಥ್ಯದ ಗೋದಾಮುಗಳನ್ನು

ವಿವಿಧ ಸಂಸ್ಥೆಗಳ ಮೂಲಕ ನಿರ್ಮಾಣ ಮಾಡಲಾಗಿದೆ. ರಾಜ್ಯದಲ್ಲಿ ತೋಟಗಾರಿಕೆ ಉತ್ಪನ್ನಗಳು ವಾರ್ಷಿಕ ಸರಾಸರಿ 155 ಲಕ್ಷ ಮೆಟ್ರಿಕ್ ಟನ್‌ನಷ್ಟು ಇದ್ದು, ಶೀತಲೀಕರಣ ಘಟಕಗಳ ಅವಶ್ಯವಿರುತ್ತದೆ. ಈ ರೀತಿ ನಿರ್ಮಾಣ ಮಾಡಲಾಗುವ ಗೋದಾಮುಗಳ ಹಾಗೂ ಶೀತಲೀಕರಣ ಘಟಕಗಳ ಸ್ಥಾಪನೆಗೆ ಪಡೆದ ಬ್ಯಾಂಕ್ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ.

ಈ ಯೋಜನೆಯಿಂದ ಆಗುವ ಅನುಕೂಲಗಳೇನೆಂದರೆ, ಕಟಾವಿನ ನಂತರ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವ ಮೊದಲು ಮಳೆ, ಗಾಳಿ ಹಾಗೂ ಇತರೆ ಹವಾಮಾನ ವೈಪರೀತ್ಯಗಳಿಂದ ಸಂರಕ್ಷಿಸಿ, ವೈಜ್ಞಾನಿಕವಾಗಿ ಸಂಗ್ರಹಣೆ ಮಾಡುವುದರಿಂದ ಸುಮಾರು ಶೇ. 10 ರಿಂದ 12 ರಷ್ಟು ನಷ್ಟವನ್ನು ಕಡಿತ ಗೊಳಿಸಬಹುದಾಗಿದೆ. ರೈತರಿಗೆ ಹಾಗೂ ಬಳಕೆದಾರರಿಗೆ ಕೃಷಿ ಉತ್ಪನ್ನಗಳ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳಲು ಗ್ರಾಮೀಣ ಪ್ರದೇಶದಲ್ಲಿ ಗೋದಾಮುಗಳ ನಿರ್ಮಾಣ ಅವಶ್ಯವಿರುತ್ತದೆ. ಉತ್ತಮ ಗುಣಮಟ್ಟದ ಉತ್ಪನ್ನಗಳು ರೈತರಿಗೆ ಹೆಚ್ಚಿನ ಬೆಲೆಯನ್ನೂ ಸಹ ಒದಗಿಸಿಕೊಡುವುದರಿಂದ ಅವರ ಆರ್ಥಿಕ ಸಂಕಷ್ಟಗಳು ಕಡಿಮೆಯಾಗುತ್ತದೆ. ಉತ್ಪನ್ನಗಳು ಶೀತಲೀಕರಣ ಘಟಕದಲ್ಲಿ ಸಂಗ್ರಹಣೆ ಮಾಡುವುದರಿಂದ ಉತ್ಪನ್ನಗಳನ್ನು ಬೇಗನೆ ಹಾಳಾಗುವುದನ್ನು ತಡೆಯಬಹುದು. ಕೃಷಿ ಸಮೀಪದ ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರು ಬೆಳೆದ ಕೃಷಿ ಉತ್ಪನ್ನಗಳ ಗುಣಮಟ್ಟವನ್ನು ಕಾಪಾಡಲು ಹಾಗೂ ಆರ್ಥಿಕ ಸಂಕಷ್ಟಗಳನ್ನು ಕಡಿಮೆ ಮಾಡಲು ಪಡೆದ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸುವುದು.

ಕೃಷಿ ಅಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2013–14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿರುವ **ಕೃಷಿ ಸಮೀಪದ ಪಟ್ಟಣಗಳು ಮತ್ತು ಗ್ರಾಮಗಳಲ್ಲಿ ರೈತರಿಂದ ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣವನ್ನು ಪ್ರೋತ್ಸಾಹಿಸಲು ಬಡ್ಡಿ ಸಹಾಯಧನ** ಯೋಜನೆಯನ್ನು ರೂ.5.00 ಕೋಟಿಗಳ ವೆಚ್ಚದಲ್ಲಿ ಈ ಕೆಳಕಂಡ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

1. ಈ ಯೋಜನೆಯು 2013–14 ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು;
2. ರಾಜ್ಯದಲ್ಲಿ ರೈತರು/ ರೈತ ಗುಂಪು/ ಸ್ವಸಹಾಯ ಗುಂಪು/ ಸಹಕಾರ ಸಂಘ/ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ/ ರೈತ ಒಕ್ಕೂಟ/ ಸರ್ಕಾರೇತರ ಸಂಸ್ಥೆಗಳು/ಖಾಸಗಿ ಸಂಸ್ಥೆ ಪಡೆದ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸುವುದು.
3. ರಾಷ್ಟ್ರೀಕೃತ ಬ್ಯಾಂಕುಗಳು ಹಾಗೂ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳಿಂದ ಗೋದಾಮು ಹಾಗೂ ಶೀತಲೀಕರಣ ಘಟಕದ ಸ್ಥಾಪನೆಗೆ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸುವುದು ಹಾಗೂ ಮೊದಲು ಬಂದ ಕೋರಿಕೆಗಳಿಗೆ ಆದ್ಯತೆ ನೀಡಲಾಗುವುದು **(First come first serve basis).**
4. ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣವು Warehouse Development and Regulatory Authority (W.D.R.A.) ರವರು ನಿಗಧಿಪಡಿಸಿರುವ ಮಾನದಂಡಗಳಿಗೊಳಪಟ್ಟಿರಬೇಕು.

5. ಉಗ್ರಾಣ ಮತ್ತು ಶೀತಲೀಕರಣ ಘಟಕಗಳ ನಿರ್ಮಾಣ ಮುಗಿದ ನಂತರ Warehouse Development and Regulatory Authority (W.D.R.A.) ರವರಿಂದ Accreditation ಪಡೆದ ನಂತರವೇ ಬಡ್ಡಿ ಸಹಾಯಧನ ನೀಡಲಾಗುವುದು.

ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣಾ ಹಾಗೂ ರಫ್ತು ನಿಗಮ ನಿಯಮಿತ (KAPPEC) ಸಂಸ್ಥೆಯನ್ನು ನೋಡಲ್ ಸಂಸ್ಥೆಯನ್ನಾಗಿ ಮಾಡಲಾಗಿದೆ.

ಉಗ್ರಾಣ ಮತ್ತು ಶೀತಲೀಕರಣ ಘಟಕಗಳನ್ನು ನಿರ್ಮಿಸುವಂತಹ ರೈತರು ಕೆಪೆಕ್ ಸಂಸ್ಥೆಯಲ್ಲಿ ಮೊದಲೇ ನೋಂದಾಯಿಸಿಕೊಳ್ಳತಕ್ಕದ್ದು. ಹಾಗೂ ಸದರಿ ನಿರ್ಮಾಣವನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು.

ಈ ಯೋಜನೆಗೆ ಅಗತ್ಯವಾಗಿರುವ ರೂ.5.00 ಕೋಟಿಗಳನ್ನು 2013-14ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆಯಾಗಿರುವ ಇತರೆ ಕೃಷಿ ಯೋಜನೆಗಳು, ಲೆಕ್ಕಶೀರ್ಷಿಕೆ:2401-00-800-1-40 ಇತರೆ ವೆಚ್ಚಗಳು (059) (ಯೋಜನೆ) ರಲ್ಲಿ ಅನುದಾನ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 39 ಪಿಎಫ್‌ಒ 2013, ದಿನಾಂಕ: 22.08.2013 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/474/ವೆಚ್ಚ-4/2013, ದಿನಾಂಕ:30-08-2013 ರ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಆರ್. ವಿಶ್ವನಾಥಾಚಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
4) ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು / ಧಾರವಾಡ / ರಾಯಚೂರು ಮತ್ತು ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ, ನವಿಲೆ, ಶಿವಮೊಗ್ಗ-577125.
5) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ,
6) ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಆಹಾರ ಸಂಸ್ಕರಣೆ ಹಾಗೂ ಕಟಾವು ತಂತ್ರಜ್ಞಾನ), ಕೃಷಿ ಇಲಾಖೆ, ಬೆಂಗಳೂರು.

9) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು.
10) ಸರ್ಕಾರದ ಕಾರ್ಯದರ್ಶಿಗಳು, ಸಿ.ಆ.ಸು. ಇಲಾಖೆ (ಆಡಳಿತ ಸುಧಾರಣೆ), ಬೆಂಗಳೂರು.
11) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
12) ಸಂಚಾಲಕರು, ರಾಜ್ಯ ಮಟ್ಟದ ಬ್ಯಾಂಕರ್‌ಗಳ ಒಕ್ಕೂಟ, ಸಿಂಡಿಕೇಟ್ ಬ್ಯಾಂಕ್, ಗಾಂಧಿನಗರ, ಬೆಂಗಳೂರು-09.
13) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
14) ವ್ಯವಸ್ಥಾಪಕ ನಿರ್ದೇಶಕರು, ಕೆಪೆಕ್, ಬೆಂಗಳೂರು.
15) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
16) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು-02.
17) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
18) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
19) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
20) ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ಬೆಂಗಳೂರು.
21) ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಕೃಷಿ ಸೇವೆ).
22) ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ:565/2013)
23) ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
24) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.